Akashvani : Bangalore
National Bulletin In Kannada
24.09.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಬಾಂಗ್ಲಾದೇಶ ವಿದೇಶಾಂಗ ಸಚಿವರೊಂದಿಗೆ ಸಚಿವ ಡಾ.ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ
- ಭಾರತೀಯ ಕರಾವಳಿ ಕಾವಲುಪಡೆಯ ಕಮಾಂಡರ್‌ಗಳ ಸಮಾವೇಶ ಉದ್ಘಾಟಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
- ನಾಳೆ ಜಮ್ಮು-ಕಾಶ್ಮೀರದಲ್ಲಿ ಎರಡನೇ ಹಂತದ ವಿಧಾನಸಭೆ ಚುನಾವಣೆ
- ಶ್ರೀಲಂಕಾ ನೂತನ ಪ್ರಧಾನಿಯಾಗಿ ಡಾ.ಹರಿಣಿ ಅಮರಸೂರ್ಯ ಪ್ರಮಾಣವಚನ ಸ್ವೀಕಾರ
- ಚೆಂಗ್ಡು ಓಪನ್ ಟೆನಿಸ್; ಪುರುಷರ ಡಬಲ್ಸ್ ವಿಭಾಗದಲ್ಲಿ ಫೈನಲ್ ಪ್ರವೇಶಿಸಿದ ಭಾರತದ ಯು.ಕಿ.ಬಾಂಬ್ರಿ- ಫ್ರೆಂಚ್‌ನ ಅಲ್ಬಾನೊ ಜೋಡಿ

**<><*<><>*><>**

ಅಮೆರಿಕದ ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನೇಪತ್ಯದಲ್ಲಿ ಇಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು, ಬಾಂಗ್ಲಾದೇಶ ವಿದೇಶಾಂಗ ಸಚಿವ ತೌಹಿದ್ ಹುಸೇನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಉಭಯ ದೇಶಗಳ ನಡುವೆ ಪರಸ್ಪರ ಸಹಕಾರ ಬಲಗೊಳಿಸುವ ನಿಟ್ಟಿನಲ್ಲಿ ಮಾತುಕತೆ ನಡೆಸಲಾಯಿತು. ಅಲ್ಲದೆ, ಪರಸ್ಪರ ಹಿತಾಸಕ್ತಿ ಇರುವ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಬಾಂಗ್ಲಾದೇಶದಲ್ಲಿ ಶೇಕ್ ಹಸೀನಾ ಅವರ ರಾಜೀನಾಮೆ ನಂತರ, ಮೊಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶ ಮಧ್ಯಂತರ ಸರ್ಕಾರ ಮತ್ತು ಭಾರತದ ನಡುವೆ ನಡೆಯುತ್ತಿರುವ ಮೊದಲ ಉನ್ನತಮಟ್ಟದ ಸಭೆ ಇದಾಗಿದೆ.

**<><*<><>*><>**

ಸಾರ್ವಜನಿಕ ಹಣಕಾಸು ಮತ್ತು ಲೆಕ್ಕ ವ್ಯವಸ್ಥೆಯನ್ನು ಪರಿಣಾಮಕಾರಿ ಹಾಗೂ ಸಕಾಲಿಕವಾಗಿ ನಿರ್ವಹಿಸುವಲ್ಲಿ ಭಾರತೀಯ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ -ಸಿಎಜಿ ಬಹುಮುಖ್ಯ ಪಾತ್ರವಹಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ದೆಹಲಿಯಲ್ಲಿಂದು ಸಿಎಜಿ ಆಯೋಜಿಸಿದ್ದ ೧೬ನೇ ಏಷ್ಯಾ ಸುಪ್ರೀಂ ಆಡಿಟ್ ಸಂಸ್ಥೆಗಳ ಒಕ್ಕೂಟದ ಸಮಾವೇಶ ಉದ್ದೇಶಿಸಿ ಅವರು, ಆಡಳಿತ ವ್ಯವಸ್ಥೆಯ ದಕ್ಷತೆ ಮತ್ತು ಗುಣಮಟ್ಟ ಉತ್ತಮಪಡಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದು ಎಂದರು. ಆಡಳಿತದಲ್ಲಿ ಪಾರದರ್ಶಕತೆ ಖಾತ್ರಿಪಡಿಸಲು ಹಾಗೂ ಸಾರ್ವಜನಿಕ ಲೆಕ್ಕದ ಬಗ್ಗೆ ಉತ್ತರದಾಯಿತ್ವವಾಗಿರಲು ಸಿಎಜಿ ಬಹುಮುಖ್ಯವಾಗಿದ್ದು, ಈ ಬಗ್ಗೆ ಸಂವಿಧಾನ ರಚನಾ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಹ ಉಲ್ಲೇಖಿಸಿದ್ದರು. ಸಂವಿಧಾನ ರಚನಾ ಸಮಿತಿಯ ನಿರೀಕ್ಷೆಯಂತೆ ಸಿಎಜಿ ನಿರಂತರವಾಗಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು ರಾಷ್ಟ್ರಪತಿ ಶ್ಲಾಘಿಸಿದರು. ಪ್ರಸ್ತುತ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆ, ಮಿಷನ್

ಲರ್ನಿಂಗ್, ಜಿಯೋ ಸ್ಪೇಷಿಯಲ್, ಡೇಟಾ ಬೇಸ್ ಮುಂತಾದ ತಂತ್ರಜ್ಞಾನ ಬಳಕೆಯ ಮೂಲಕ ಆಡಳಿತ ನಿರ್ವಹಣೆ ಹೆಚ್ಚು ಆಧುನಿಕಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಜನರಿಗೆ ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಒದಗಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದಾಗಿದೆ ಎಂದರು. ಭಾರತೀಯ ಆರ್ಥಿಕತೆ, ಡಿಜಿಟಲ್ ಆರ್ಥಿಕತೆಯತ್ತ ಪರಿವರ್ತನೆಯಾಗುತ್ತಿದ್ದು, ಇದಕ್ಕೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಡಿಪಾಯವಾಗಿದೆ. ಈ ಸ್ಥಿತ್ಯಂತರದಲ್ಲಿ ಸಿಎಜಿ ಪಾತ್ರ ಗಮನಾರ್ಹ ಎಂದರು.

<><*<><>*><>

ಸಾರ್ವಜನಿಕ ಹಣಕಾಸು ಮತ್ತು ಲೆಕ್ಕ ವ್ಯವಸ್ಥೆಯನ್ನು ಪರಿಣಾಮಕಾರಿ ಹಾಗೂ ಸಕಾಲಿಕವಾಗಿ ನಿರ್ವಹಿಸುವಲ್ಲಿ ಭಾರತೀಯ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ -ಸಿಎಜಿ ಬಹುಮುಖ್ಯ ಪಾತ್ರವಹಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ದೆಹಲಿಯಲ್ಲಿಂದು ಸಿಎಜಿ ಆಯೋಜಿಸಿದ್ದ ೧೬ನೇ ಏಷ್ಯಾ ಸುಪ್ರೀಂ ಆಡಿಟ್ ಸಂಸ್ಥೆಗಳ ಒಕ್ಕೂಟದ ಸಮಾವೇಶ ಉದ್ದೇಶಿಸಿ ಅವರು, ಆಡಳಿತ ವ್ಯವಸ್ಥೆಯ ದಕ್ಷತೆ ಮತ್ತು ಗುಣಮಟ್ಟ ಉತ್ತಮಪಡಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದು ಎಂದರು. ಆಡಳಿತದಲ್ಲಿ ಪಾರದರ್ಶಕತೆ ಖಾತ್ರಿಪಡಿಸಲು ಹಾಗೂ ಸಾರ್ವಜನಿಕ ಲೆಕ್ಕದ ಬಗ್ಗೆ ಉತ್ತರದಾಯಿತ್ವವಾಗಿರಲು ಸಿಎಜಿ ಬಹುಮುಖ್ಯವಾಗಿದ್ದು, ಈ ಬಗ್ಗೆ ಸಂವಿಧಾನ ರಚನಾ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಹ ಉಲ್ಲೇಖಿಸಿದ್ದರು. ಸಂವಿಧಾನ ರಚನಾ ಸಮಿತಿಯ ನಿರೀಕ್ಷೆಯಂತೆ ಸಿಎಜಿ ನಿರಂತರವಾಗಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು ರಾಷ್ಟ್ರಪತಿ ಶ್ಲಾಘಿಸಿದರು. ಪ್ರಸ್ತುತ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆ, ಮಿಷನ್ ಲರ್ನಿಂಗ್, ಜಿಯೋ ಸ್ಪೇಷಿಯಲ್, ಡೇಟಾ ಬೇಸ್ ಮುಂತಾದ ತಂತ್ರಜ್ಞಾನ ಬಳಕೆಯ ಮೂಲಕ ಆಡಳಿತ ನಿರ್ವಹಣೆ ಹೆಚ್ಚು ಆಧುನಿಕಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಜನರಿಗೆ ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಒದಗಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದಾಗಿದೆ ಎಂದರು. ಭಾರತೀಯ ಆರ್ಥಿಕತೆ, ಡಿಜಿಟಲ್ ಆರ್ಥಿಕತೆಯತ್ತ ಪರಿವರ್ತನೆಯಾಗುತ್ತಿದ್ದು, ಇದಕ್ಕೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಡಿಪಾಯವಾಗಿದೆ. ಈ ಸ್ಥಿತ್ಯಂತರದಲ್ಲಿ ಸಿಎಜಿ ಪಾತ್ರ ಗಮನಾರ್ಹ ಎಂದರು.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನಾಳೆ ಉತ್ತರಪ್ರದೇಶದ ಗೌತಮ್ ಬುದ್ಧ ನಗರದಲ್ಲಿ ಉತ್ತರ ಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ-ಯುಪಿಐಟಿಎಸ್ ನ ಎರಡನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮ, ಉತ್ತರ ಪ್ರದೇಶದ ವ್ಯಾಪಾರ ಮತ್ತು ಸಂಸ್ಕೃತಿಯನ್ನು ಪ್ರದರ್ಶಿಸುವ ಜೊತೆಗೆ ವಿಯೆಟ್ನಾಂ ಅನ್ನು ಪ್ರಮುಖ ಪಾಲುದಾರ ದೇಶವಾಗಿ ಗುರುತಿಸಲಿದೆ. ಐದು ದಿನಗಳ ಈ ವ್ಯಾಪಾರ ಪ್ರದರ್ಶನ ಇದೇ ೨೯ ರಂದು ಮುಕ್ತಾಯಗೊಳ್ಳಲಿದೆ. ಯುಪಿಐಟಿಎಸ್ ನ ಮೊದಲ ಆವೃತ್ತಿಯನ್ನು ಅಧ್ಯಕ್ಷ ದ್ರೌಪದಿ ಮುರ್ಮು ಅವರು ಕಳೆದ ವರ್ಷ ಉದ್ಘಾಟಿಸಿದರು.

<><*<><>*><>

ಮೈಸೂರಿನ ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ತಮ್ಮ ವಿರುದ್ಧ ಪ್ರಾಸಿಕ್ಯೂಶನ್‌ಗೆ ರಾಜ್ಯಪಾಲರು ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ರಾಜ್ಯ ಹೈಕೋರ್ಟ್ ವಜಾಗೊಳಿಸಿದೆ. ಇದರಿಂದ ವಿಚಾರಣೆಗೆ ತಡೆ ನೀಡುವಂತೆ ಕೋರಿ ಮುಖ್ಯಮಂತ್ರಿ ಸಲ್ಲಿಸಿದ್ದ ಮನವಿಯನ್ನು ನ್ಯಾಯಾಲಯ ತಿರಸ್ಕರಿಸಿದೆ. ರಾಜ್ಯಪಾಲರು ವಿಚಾರಣೆಗೆ ನೀಡಿದ ಅನುಮತಿ ಕ್ರಮಬದ್ಧವಾಗಿದೆ ಎಂದು ನ್ಯಾಯಪೀಠ ಹೇಳಿದೆ. ಇನ್ನೊಂದೆಡೆ, ಮುಡಾ ಪ್ರಕರಣದ

ಭ್ರಷ್ಟಾಚಾರ ಆರೋಪಗಳ ವಿರುದ್ಧ ಮುಕ್ತ ಸ್ವತಂತ್ರ ತನಿಖೆಗೆ ದಾರಿ ಮಾಡಿಕೊಡಲು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸಿದೆ. ದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಇಂದು ಮಾತನಾಡಿದ ಬಿಜೆಪಿ ಹಿರಿಯ ನಾಯಕ ರಾಜೀವ್ ಚಂದ್ರಶೇಖರ್, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಆರ್ಥಿಕತೆ ತೀವ್ರ ಸಂಕಷ್ಟದಲ್ಲಿದೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕಚೇರಿಯನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ರಾಜೀವ್ ಚಂದ್ರಶೇಖರ್ ಆರೋಪಿಸಿದ್ದಾರೆ.

<><*<><>*><>

೧೧ನೇ ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಅಸೋಸಿಯೇಶನ್-ಸಿಪಿಎ ಭಾರತ ಪ್ರದೇಶ ಸಮ್ಮೇಳನದಲ್ಲಿ ಶಾಸಕಾಂಗ ಸಭೆಗಳ ಡಿಜಿಟಲೀಕರಣ, ಶಾಸಕರ ಸಾಮರ್ಥ್ಯ ವೃದ್ಧಿ, ಸುಸ್ಥಿರ ಮತ್ತು ಅಂತರ್ಗತ ಅಭಿವೃದ್ಧಿಯಲ್ಲಿ ಶಾಸಕಾಂಗ ಸಂಸ್ಥೆಗಳ ಪಾತ್ರ ಸೇರಿದಂತೆ ವಿವಿಧ ವಿಷಯಗಳ ಕುರಿತು ಉತ್ಪಾದಕ ಚರ್ಚೆ ನಡೆದಿದೆ ಎಂದು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಹೇಳಿದ್ದಾರೆ. ಸಿಪಿಎ ಭಾರತ ಪ್ರದೇಶ ಅಧ್ಯಕ್ಷರೂ ಆಗಿರುವ ಓಂ ಬಿರ್ಲಾ ಅವರು ಇಂದು ನವದೆಹಲಿಯಲ್ಲಿ ಮುಕ್ತಾಯಗೊಂಡ ಎರಡು ದಿನಗಳ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಮ್ಮೇಳನದ ಮುಕ್ತಾಯದ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಲೋಕಸಭಾ ಸ್ಪೀಕರ್, ಶಾಸಕಾಂಗ ಸಂಸ್ಥೆಗಳು ಜನರಲ್ಲಿ ಹೆಚ್ಚು ಕ್ರಿಯಾಶೀಲವಾಗಬೇಕು ಎಂದು ಸಭೆಯಲ್ಲಿ ಭಾಗಿಯಾದ ಎಲ್ಲರೂ ಅಭಿಪ್ರಾಯಪಟ್ಟರು. ಇದರಿಂದಾಗಿ ಸುಸ್ಥಿರ ಮತ್ತು ಅಂತರ್ಗತ ಅಭಿವೃದ್ಧಿಯ ಪ್ರಯೋಜನಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಲಿವೆ ಎಂದರು. 'ಒಂದು ರಾಷ್ಟ್ರ ಒಂದು ಡಿಜಿಟಲ್ ವೇದಿಕೆ'ಯ ಗುರಿಯನ್ನು ಸಾಧಿಸಲು ರಾಜ್ಯಗಳ ವಿಧಾನಸಭೆಗಳ ಡಿಜಿಟಲೀಕರಣವನ್ನು ಪೂರ್ಣಗೊಳಿಸುವ ಬಗ್ಗೆಯೂ ಚರ್ಚೆ ನಡೆಯಿತು ಎಂದು ತಿಳಿಸಿದರು.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ ಎರಡನೇ ಹಂತದ ವಿಧಾನಸಭಾ ಚುನಾವಣೆ ನಾಳೆ ನಡೆಯಲಿದ್ದು, ಮುಕ್ತ ಮತ್ತು ಶಾಂತಿಯುವ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಐದು ಜಿಲ್ಲೆಗಳ ೨೬ ವಿಧಾನಸಭಾ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದೆ. ೨೫ ಲಕ್ಷದ ೭೮ ಸಾವಿರ ಅರ್ಹ ಮತದಾರರು ಈ ಹಂತದಲ್ಲಿ ೨೩೯ ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಎರಡನೇ ಹಂತದ ಮತದಾನದ ಪ್ರಚಾರ ನಿನ್ನೆ ಸಂಜೆ ಅಂತ್ಯಗೊಂಡಿದೆ. ಕೇಂದ್ರಾಡಳಿತ ಪ್ರದೇಶದಲ್ಲಿ ಮೂರು ಹಂತಗಳಲ್ಲಿ ವಿಧಾನಸಭೆ ಚುನಾವಣೆ ನಡೆಯುತ್ತಿದೆ. ಅಕ್ಟೋಬರ್ ೮ ರಂದು ಮತ ಎಣಿಕೆ ನಡೆಯಲಿದೆ. ಸೆಪ್ಟೆಂಬರ್ ೧೮ ರಂದು ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆಯಲ್ಲಿ ಶೇಕಡಾ ೬೧ ರಷ್ಟು ಮತದಾನ ದಾಖಲಾಗಿತ್ತು. ಮೂರನೇ ಹಂತದಲ್ಲಿ ೪೦ ವಿಧಾನಸಭಾ ಕ್ಷೇತ್ರಗಳಿಗೆ ಅಕ್ಟೋಬರ್ ೧ ರಂದು ಮತದಾನ ನಡೆಯಲಿದೆ.

<><*<><>*><>

ನ್ಯಾಷನಲ್ ಪೀಪಲ್ಸ್ ಪವರ್ ಸಂಸದೆ ಡಾ.ಹರಿಣಿ ಅಮರಸೂರ್ಯ ಅವರು ಶ್ರೀಲಂಕಾದ ನೂತನ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಶ್ರೀಲಂಕಾ ರಾಷ್ಟ್ರಪತಿಗಳ ಕಾರ್ಯಾಲಯದಲ್ಲಿ ರಾಷ್ಟ್ರಪತಿ ಅನುರ ಕುಮಾರ ಡಿಸ್ಸಾನಾಯಕ ಅವರ ಸಮ್ಮುಖದಲ್ಲಿ ಡಾ. ಹರಿಣಿ ಅಮರಸೂರ್ಯ

ಇಂದು ಮಧ್ಯಾಹ್ನ ಪ್ರಮಾಣ ವಚನ ಸ್ವೀಕರಿಸಿದರು. ಇದೇ ವೇಳೆ, ಎನ್‌ಪಿಪಿ ಸಂಸದರಾದ ವಿಜಿತ್ ಹೆರಾತ್ ಮತ್ತು ಲಕ್ಷ್ಮಣ್ ನಿಪುನ್ ಅರಾಚ್ಚಿ, ಸಂಪುಟ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

<><*<><>*><>

ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಅತಿಶಿ ಅವರು ಇಂದು ಅಧಿಕಾರ ವಹಿಸಿಕೊಂಡರು. ಈ ಮೂಲಕ ಸುಷ್ಮಾ ಸ್ವರಾಜ್ ಮತ್ತು ಶೀಲಾ ದೀಕ್ಷಿತ್ ನಂತರ ಅತಿಶಿ ಅವರು ದೆಹಲಿಯ ಮೂರನೇ ಮಹಿಳಾ ಮುಖ್ಯಮಂತ್ರಿಯಾಗಿದ್ದಾರೆ. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಅತಿಶಿ, ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಅರವಿಂದ ಕೇಜ್ರೀವಾಲ್ ಮತ್ತೆ ಮುಖ್ಯಮಂತ್ರಿಯಾಗಲಿದ್ದು, ಅದುವರೆಗೆ ಅವರ ಮಾರ್ಗದರ್ಶನದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮುಂದುವರೆಸುವುದಾಗಿ ಹೇಳಿದ್ದಾರೆ.

<><*<><>*><>

ಚೀನಾದಲ್ಲಿ ನಡೆಯುತ್ತಿರುವ ಚೆಂಗ್ಡು ಓಪನ್ ಟೆನಿಸ್ ಚಾಂಪಿಯನ್‌ಶಿಪ್‌ನ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಯು.ಕಿ.ಬಾಂಬ್ರಿ ಹಾಗೂ ಫ್ರೆಂಚ್‌ನ ಸಹಭಾಗಿ ಅಲ್ಬಾನೊ ವಲಿವೆಟ್ಟಿ ಜೋಡಿ ಫೈನಲ್ ಪ್ರವೇಶಿಸಿದೆ. ಭಾರತ-ಫ್ರೆಂಚ್ ಜೋಡಿ ಇದೀಗ ಫೈನಲ್‌ನಲ್ಲಿ ಅಗ್ರ ಶ್ರೇಯಾಂಕಿತ ಫ್ರಾನ್ಸ್‌ನ ಸೆಡಿಯೊ ದೌಂಬಿಯಾ ಹಾಗೂ ಫಬಿಯನ್ ರೆಬೋಲ್ ಜೋಡಿಯನ್ನು ಎದುರಿಸಲಿದೆ. ಪುರುಷರ ಡಬಲ್ಸ್ ಸೆಮಿಫೈನಲ್ಸ್‌ನಲ್ಲಿ ಭಾರತದ ಯೂಕಿ ಭಾಂಬ್ರಿ ಮತ್ತು ಫ್ರಾನ್ಸ್‌ನ ಅಲ್ಬಾನೊ ಒಲಿವೆಟ್ಟಿ ಅವರು ಎರಡನೇ ಶ್ರೇಯಾಂಕದ ಡಬಲ್ಸ್ ಜೋಡಿ ಇವಾನ್ ಡೋಡಿಗ್ ಮತ್ತು ರಾಫೆಲ್ ಮಾಟೋಸ್ ಅವರನ್ನು ೬-೩, ೭-೬, ೧೧-೯ ಸೆಟ್‌ಗಳಿಂದ ಸೋಲಿಸಿ, ಫೈನಲ್‌ಗೆ ಪ್ರವೇಶಿಸಿದರು.

<><*<><>*><>

ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ಇದುವರೆಗೂ ಯೋಜಿತ ಪ್ರದೇಶಗಳ ಸ್ವಚ್ಛತಾ ಕಾರ್ಯ ಭರದಿಂದ ಸಾಗಿದೆ ಎಂದು ಕೇಂದ್ರ ವಸತಿ ಹಾಗೂ ನಗರಾಭಿವೃದ್ಧಿ ಸಚಿವಾಲಯ ತಿಳಿಸಿದೆ. ಐದು ಲಕ್ಷಕ್ಕೂ ಅಧಿಕ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಇದುವರೆಗೂ ಶೇಕಡ ೨೫ರಷ್ಟು ಪ್ರದೇಶಗಳನ್ನು ಶುಚಿಗೊಳಿಸಲಾಗಿದೆ. ಈ ಅಭಿಯಾನದಲ್ಲಿ ಮೂರು ಕೋಟಿಗೂ ಅಧಿಕ ಮಂದಿ ಕೈಜೋಡಿಸಿದ್ದಾರೆ ಎಂದು ಮಾಹಿತಿ ನೀಡಿದೆ. ದೇಶಾದ್ಯಂತ ಅಭಿಯಾನದಡಿ ನಾಲ್ಕು ಲಕ್ಷಕ್ಕೂ ಅಧಿಕ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ಮುಂದುವರಿದಿದ್ದು, ರಾಜ್ಯಗಳಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿವೆ ಎಂದು ಕೇಂದ್ರ ವಸತಿ ಹಾಗೂ ನಗರಾಭಿವೃದ್ಧಿ ಸಚಿವಾಲಯ ತಿಳಿಸಿದೆ.

<><*<><>*><>

ನವದೆಹಲಿಯ ಆಲ್ ಇಂಡಿಯಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್-ಏಮ್ಸ್, ಮತ್ತು ತಂತ್ರಜ್ಞಾನ ಕಂಪನಿ 'ಇಂಟ್ಯೂಟಿವ್' ಇಂದು ರೋಬೋಟಿಕ್ ಶಸ್ತ್ರಚಿಕಿತ್ಸೆಗಾಗಿ ನವೀನ ಹೊಸ ತರಬೇತಿ ಕೇಂದ್ರವನ್ನು ಸ್ಥಾಪಿಸಲು ತಿಳುವಳಿಕೆ ಪತ್ರಕ್ಕೆ ಸಹಿ ಹಾಕಿದೆ. AIIMS ಡಾವಿನ್ಸಿ ರೊಬೊಟಿಕ್ ಶಸ್ತ್ರಚಿಕಿತ್ಸಾ ಕೇಂದ್ರವು ಮೂತ್ರಶಾಸ್ತ್ರ, ಸ್ತ್ರೀರೋಗ ಶಾಸ್ತ್ರ, ಸಾಮಾನ್ಯ ಶಸ್ತ್ರಚಿಕಿತ್ಸೆ ಸೇರಿದಂತೆ ಇತರೆ ಶಸ್ತ್ರಚಿಕಿತ್ಸೆ ಒಳಗೊಂಡತೆ ರೊಬೊಟಿಕ್ ನೆರವಿನ ಶಸ್ತ್ರಚಿಕಿತ್ಸೆಯನ್ನು ಮಾಡಲು ಕೌಶಲ್ಯ ಮತ್ತು ತಂತ್ರಜ್ಞಾನದೊಂದಿಗೆ ಶಸ್ತ್ರಚಿಕಿತ್ಸಕರು ಮತ್ತು ಆರೈಕೆ ತಂಡಗಳನ್ನು ಸಜ್ಜುಗೊಳಿಸಲಿದೆ. ಈ ಕುರಿತು ಏಮ್ಸ್‌ನ ನಿರ್ದೇಶಕ ಡಾ.ಶ್ರೀನಿವಾಸ್ ಮಾತನಾಡಿ, ಸಂಸ್ಥೆಯು ಅನುಭವಿ ರೊಬೊಟಿಕ್ ಶಸ್ತ್ರಚಿಕಿತ್ಸಕರ

ಗುಂಪನ್ನು ಹೊಂದಿದೆ. ಇವರು, ದೇಶಾದ್ಯಂತ ಹೊಸ ಶಸ್ತ್ರಚಿಕಿತ್ಸಕರಿಗೆ ಮಾರ್ಗದರ್ಶನ ಮತ್ತು ತರಬೇತಿ ನೀಡುತ್ತಾರೆ. ಈ ಕೇಂದ್ರವು ದೇಶದಾದ್ಯಂತ ಶಸ್ತ್ರಚಿಕಿತ್ಸಾ ಕೌಶಲ್ಯಗಳನ್ನು ಹೆಚ್ಚಿಸಲು ಮತ್ತು ರೋಗಿಗಳ ಆರೈಕೆಯ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸಲಿದೆ ಎಂದು ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**